# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಬೆಳಗಾವಿ ಜಿಲ್ಲೆ ಕಿತ್ತೂರು ತಾಲ್ಲೂಕಿನ ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಗೆ ಹುದ್ದೆ ಮಂಜೂರು ಮಾಡುವ ಬಗ್ಗೆ.

**ಓದಲಾಗಿದೆ:-**
1. ಸರ್ಕಾರದ ಆದೇಶ ಸಂಖ್ಯೆ:ಹಿಂವಕ 335 ಬಿಎಂಎಸ್ 2012 ದಿನಾಂಕ:21.11.2012.
2. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಇವರ ಏಕ ಕಡತ ಪ್ರಸ್ತಾವನೆ ಸಂಖ್ಯೆ:KREIS/ADMN/PSAN/15/2022-ADMN, ದಿನಾಂಕ: 24.11.2022.

*********

**ಪ್ರಸ್ತಾವನೆ:-**

ಮೇಲೆ ಓದಲಾದ (1)ರ ಸರ್ಕಾರದ ಆದೇಶದಲ್ಲಿ ಉತ್ತರ ಕರ್ನಾಟಕ ಜಿಲ್ಲೆಗಳ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳ ಅನುಕೂಲಕ್ಕಾಗಿ 12 ಕಿತ್ತೂರು ರಾಣಿ ಚೆನ್ನಮ್ಮ ಬಾಲಕಿಯರ ವಸತಿ ಶಾಲೆಗಳು, 15 ಮೊರಾರ್ಜಿ ದೇಸಾಯಿ ವಸತಿ ಶಾಲೆಗಳು ಹಾಗೂ 08 ಅಟಲ್ ಬಿಹಾರಿ ವಾಜಪೇಯಿ ವಸತಿ ಶಾಲೆಗಳನ್ನು 2013-14ನೇ ಸಾಲಿನ ಶೈಕ್ಷಣಿಕ ವರ್ಷದಿಂದ ಪ್ರಾರಂಭಿಸಲು ಮಂಜೂರಾತಿ ನೀಡಿ ಆದೇಶಿಸಿದೆ.

ಮೇಲೆ ಓದಲಾದ (2)ರ ಏಕ ಕಡತ ಪ್ರಸ್ತಾವನೆಯಲ್ಲಿ ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಇವರು 2012-13ನೇ ಸಾಲಿನಲ್ಲಿ ಮಂಜೂರಾತಿ ಮಾಡಿರುವ 26 ಹಿಂದುಳಿದ ವರ್ಗದ ವಸತಿ ಶಾಲೆಗಳ ಪೈಕಿ ಬೆಳಗಾವಿ ಜಿಲ್ಲೆ ಕಿತ್ತೂರು ತಾಲ್ಲೂಕಿಗೆ ಮಂಜೂರಾಗಿರುವ ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಗೆ ಆರ್ಥಿಕ ಇಲಾಖೆಯ ಅನುಮೋದನೆಯೊಂದಿಗೆ ಅವಶ್ಯಕವಾಗಿ ಬೇಕಾಗಿರುವ ಬೋಧಕ/ಬೋಧಕೇತರ ಹುದ್ದೆಗಳನ್ನು ಮಂಜೂರು ಮಾಡಿ ವಸತಿ ಶಾಲೆಯನ್ನು ಪ್ರಾರಂಭಿಸಲು ಸರ್ಕಾರದ ಆದೇಶ ಹೊರಡಿಸುವಂತೆ ಕೋರಿ ಏಕಕಡತ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಮುಂದುವರೆದಂತೆ ಹುದ್ದೆಗಳಿಗೆ ಭರಿಸಬೇಕಾದ ವೆಚ್ಚವನ್ನು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಲೆಕ್ಕಶೀರ್ಷಿಕೆ: 2225-03-277-2-62(ರಾಜ್ಯವಲಯ-ಯೋಜನೆ)ರಡಿ ಭರಿಸಲಾಗುವುದು ಎಂದು ತಿಳಿಸಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: ಹಿಂವಕ 845 ಬಿಎಂಎಸ್ 2022
## ಬೆಂಗಳೂರು, ದಿನಾಂಕ:20-12 -2022

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ ಬೆಳಗಾವಿ ಜಿಲ್ಲೆ ಕಿತ್ತೂರು ತಾಲ್ಲೂಕಿನ ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಗೆ ಮೊದಲ ವರ್ಷಕ್ಕೆ ಅಗತ್ಯವಿರುವ ವಿವಿಧ ವೃಂದದ ಒಟ್ಟು 09 ಹುದ್ದೆಗಳನ್ನು ಈ ಆದೇಶದ ಅನುಬಂಧದಲ್ಲಿ ನಮೂದಿಸಿರುವಂತೆ ಸೃಜಿಸಲು ಸರ್ಕಾರ ಅನುಮತಿ ನೀಡಿ ಆದೇಶಿಸಿದೆ.

ಶ್ರೀ. 20/12/22